## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹುದ್ದೆಗಳನ್ನು ಮರುಪದನಾಮೀಕರಣ ಮತ್ತು ರದ್ದುಪಡಿಸುವ ಬಗ್ಗೆ ಆದೇಶ.

ಓದಲಾಗಿದೆ:
1) ಅಧಿಸೂಚನೆ ಸಂಖ್ಯೆ: ಸಿಆಸುಇ 19 ಸೇನಿಡಿ 93, ದಿನಾಂಕ:22.07.1993.
2) ಸರ್ಕಾರದ ಆದೇಶ ಸಂಖ್ಯೆ ಸಿಐ 52 ಎಂಜಿಎಸ್ 2014 ದಿನಾಂಕ: 20-06-2014.
3) ಸರ್ಕಾರದ ಆದೇಶ ಸಂಖ್ಯೆ ಸಿಐ 140 ಎಂಜಿಎಸ್ 2012 ದಿನಾಂಕ:18-01-2016.
4) ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರ ಪತ್ರ ಸಂಖ್ಯೆ: ಗಭೂಇ/ಸಿಬ್ಬಂದಿ-1/ಮ.ಪ/01/2020-21/916 ದಿನಾಂಕ: 16-05-2020.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಅಧಿಸೂಚನೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಗಣಿ ಮತ್ತು ಭೂವಿಜ್ಞಾನ ನಿರ್ದೇಶನಾಲಯದ ಒಂದು ವಿಭಾಗವಾಗಿದ್ದ ಅಂತರ್ಜಲ ವಿಭಾಗವನ್ನು ಅವಶ್ಯಕ ಅಧಿಕಾರಿ / ಸಿಬ್ಬಂದಿಯ ಸಹಿತ ಹುದ್ದೆಗಳೊಂದಿಗೆ ಪ್ರತ್ಯೇಕ ಅಂತರ್ಜಲ ನಿರ್ದೇಶನಾಲಯವನ್ನು ಸೃಜಿಸಲಾಗಿದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯನ್ನು ಪುನರ್ ವಿನ್ಯಾಸಗೊಳಿಸಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ 482 ವಿವಿಧ ಹುದ್ದೆಗಳನ್ನು ಸೃಜಿಸಲು ಹಾಗೂ ಹುದ್ದೆಗಳನ್ನು ಸ್ಥಳಾಂತರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಪ್ರಸ್ತಾವನೆಯಲ್ಲಿ, ಸರ್ಕಾರಕ್ಕೆ ಹೆಚ್ಚಿನ ಆದಾಯ ಸಂಗ್ರಹಿಸುವ ಹಾಗೂ ಆಡಳಿತ ಸುಧಾರಣೆಯ ಹಿತದೃಷ್ಟಿಯಿಂದ ಮತ್ತು ನೌಕರರ ವರ್ಗದ ಹಿತವನ್ನು ಕಾಪಾಡುವ ದೃಷ್ಟಿಯಿಂದ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ಅಗತ್ಯವಾಗಿರುವ ವಿವಿಧ ವೃಂದಗಳ 152 ಹುದ್ದೆಗಳಲ್ಲಿ 122 ಹುದ್ದೆಗಳನ್ನು ಪರಿವರ್ತಿಸಲು, ಮರುಪದನಾಮೀಕರಣಗೊಳಿಸಲು ಮತ್ತು ಉನ್ನತೀಕರಿಸಲು, ಅಧ್ಯರ್ಪಿಸಲು ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರು ಪ್ರಸ್ತಾಪಿಸಿರುತ್ತಾರೆ.

5. ಸರ್ಕಾರವು, ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಇವರು ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಐ 80 ಎಂಜಿಎಸ್ 2020**
**ಬೆಂಗಳೂರು, ದಿನಾಂಕ: 16-02-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹುದ್ದೆಗಳನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

1. ಮಂಜೂರಾಗಿರುವ ಒಟ್ಟು 8 ಕೊರೆಯುವ ಅಭಿಯಂತರರ (ರೂ. 45300-88300) ಹುದ್ದೆಗಳ ಪೈಕಿ 3 ಹುದ್ದೆಗಳನ್ನು ಸಹಾಯಕ ಕಾರ್ಯಪಾಲಕ ಅಭಿಯಂತರ ಹುದ್ದೆಯೆಂದು (ರೂ.45300-88300) ಮರುಪದನಾಮೀಕರಿಸಿದೆ.
2. ಮಂಜೂರಾಗಿರುವ 33 ಸಹಾಯಕ ಭೈರಿಗೆದಾರ (ರೂ. 27650-52650) ಹುದ್ದೆಗಳ ಪೈಕಿ ಖಾಲಿ ಇರುವ 30 ಹುದ್ದೆಗಳನ್ನು ರದ್ದುಗೊಳಿಸಿದೆ.

..2



ile No. C I-MGS/163/2024-UNDER SECRETARY MINES-2-C&I SEC (Computer No. 1534504)
Scanned with CamScanner

3. ಮಂಜೂರಾಗಿರುವ 54 ಹೆಲ್ಪರ್ ಕಂ ಆಪರೇಟರ್ (ವೇತನ ಶ್ರೇಣಿ ರೂ.18600-32600) ಹುದ್ದೆಗಳು ಖಾಲಿ ಇದ್ದು, ಈ ಎಲ್ಲ ಹುದ್ದೆಗಳನ್ನು ರದ್ದುಗೊಳಿಸಿದೆ.
4. ಮಂಜೂರಾಗಿರುವ 1 ವೆಲ್ಡರ್ (ವೇತನ ಶ್ರೇಣಿ ರೂ.18600-32600) ಹುದ್ದೆಯನ್ನು ರದ್ದುಗೊಳಿಸಿದೆ.

ಸಹಾಯಕ ಕಾರ್ಯಪಾಲಕ ಅಭಿಯಂತರ ಹುದ್ದೆಗಳನ್ನು ಭರ್ತಿ ಮಾಡುವ ವಿಧಾನವನ್ನು ಪ್ರತ್ಯೇಕವಾಗಿ ಪರಿಗಣಿಸಲಾಗುವುದು. ಹುದ್ದೆಗಳ ಸಂಬಂಧವಾಗಿ ಈ ಮೇಲಿನ ಪರಿಷ್ಕರಣೆಯ ಬಗ್ಗೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿ ತರುವ ಬಗ್ಗೆ ಕ್ರಮವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 224 ವೆಚ್ಚ-1/2020, ದಿನಾಂಕ: 10-11-2020 ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶಿವಪ್ರಕಾಶ್)
ಪೀಠಾಧಿಕಾರಿ (ಗಣಿ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:-
1) ಮಹಾಲೇಖಪಾಲರು (ಲೆಕ್ಕ ಪತ್ರ ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಖನಿಜ ಭವನ ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನಸೌಧ.
4) ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ.
5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಎಂಎಸ್‌ಎಂಇ & ಗಣಿ) ರವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
6) ಸರ್ಕಾರದ ಉಪ ಕಾರ್ಯದರ್ಶಿ(ಗಣಿ) ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
7) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.


File No. C I-MGS/163/2024-UNDER SECRETARY MINES-2-C&I SEC (Computer No. 1534504)
Scanned with CamScanner